ದಿನಾಂಕ 19.12.2024 ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಪಾಟೀ ಸವಾಲು 2 ನೇ ಆರೋಪಿ ಪರ ವಕೀಲರಿಂದಃ-

ನಾನು ಎಂ.ಸಿ.ಎ., ಮುಗಿಸಿದ್ದೇನೆ. ಮಹಜರ್ ಆದ ದಿನಾಂಕ 07.10.2020. ಮಹಜರ್‌ಗೆ ಬನ್ನಿ ಎಂದು ಪೊಲೀಸರು ನನಗೆ ನೋಟಿಸ್ ಕೊಟ್ಟಿರಲಿಲ್ಲ. ಮಹಜರ್‌ಗೆ ಅನಂತ್‌ಕುಮಾರ್ ರವರು ಸಹ ಸಹಿ ಮಾಡಿದ್ದಾರೆ. ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಮಹಜರ್‌ನಲ್ಲಿ ಪೊಲೀಸರು ಏನು ಬರೆದುಕೊಂಡಿದ್ದಾರೆಂದು ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ಮಹಜರ್ ಬರೆದ ಸ್ಥಳದ ಪೂರ್ವಕ್ಕೆ ಹೊಳೆ, ಪಶ್ಚಿಮಕ್ಕೆ ಹೈವೇ, ಉತ್ತರಕ್ಕೆ ಖಾಸಗಿಯವರ ಆಸ್ತಿ ಮತ್ತು ದಕ್ಷಿಣಕ್ಕೆ ಖಾಸಗಿಯವರ ಆಸ್ತಿ ಇದೆ. 2020 ರಲ್ಲಿ ನಾನು ವಿದ್ಯಾಭ್ಯಾಸ ಮಾಡುತ್ತಿದ್ದೆ. ದಿನಾಂಕ 07.10.2020 ರಂದು ನಾನು ಕಾಲೇಜಿಗೆ ಹೋಗಿದ್ದೆ ಎಂದರೆ ಸರಿಯಲ್ಲ. ಆ ದಿನ ಯಾಕೆ ಕಾಲೇಜಿಗೆ ಹೋಗಿರಲಿಲ್ಲ ಎಂದರೆ ಸಾಕ್ಷಿಯು ನನ್ನ ಅಜ್ಜಿಯ ಒಡವೆ ಕಳ್ಳತನವಾಗಿದ್ದಕ್ಕೆ ಹೋಗಿರಲಿಲ್ಲ ಎಂದು ನುಡಿಯುತ್ತಾರೆ. ಪೊಲೀಸರು ಸ್ಥಳಕ್ಕೆ ಬಂದೇ ಇಲ್ಲ, ನನ್ನ ಅಜ್ಜಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪೊಲೀಸರು ಸ್ಥಳದಲ್ಲಿ ಮಹಜರ್ ಮಾಡಿಲ್ಲ, ಠಾಣೆಯಲ್ಲಿ ಕುಳಿತು ಬರೆದಿದ್ದಾರೆ ಎಂದರೆ ಸರಿಯಲ್ಲ.

ಶ್ರೀ ಎಸ್.ಹೆಚ್.ಪಿ., ಮತ್ತು ಶ್ರೀ ಪಿ.ಡಿ., ವಕೀಲರು ಆರೋಪಿ 1 ಮತ್ತು 3 ರವರ ಪರವಾಗಿ 2 ನೇ ಆರೋಪಿ ಪರ ವಕೀಲರು ಮಾಡಿರುವ ಪಾಟೀ ಸವಾಲನ್ನು ಅಳವಡಿಸಿಕೊಳ್ಳುವುದಾಗಿ ತಿಳಿಸಿರುತ್ತಾರೆ.

ಮರು ವಿಚಾರಣೆ ಃ ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

**(ಲೋಕೇಶ)**
ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು.
ರಾಮನಗರ.